# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 1565 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 17.03.2026 |
| ಉತ್ತರಿಸುವ ಸಚಿವರು | : | ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಮೈಸೂರು ಜಿಲ್ಲೆಯ ಪ್ರಸಿದ್ಧ ಸಾಂಪ್ರದಾಯಿಕ ಕಲೆಗಳಾದ ಗಂಧದ ಕೆತ್ತನೆ, ಮೈಸೂರು ಪೇಂಟಿಂಗ್ ಮತ್ತು ಕೃಷಿ ಸಂಸ್ಕರಣಾ ಉದ್ದಿಮೆಗಳನ್ನು (Agro-processing) ಉತ್ತೇಜಿಸಲು ಸರ್ಕಾರವು ಕೈಗೊಂಡಿರುವ ವಿಶೇಷ ಕ್ರಮಗಳು ಯಾವುವು; | ರಾಜ್ಯದಲ್ಲಿ ಸಾಂಪ್ರದಾಯಿಕ ಕಲೆಗಳು ಮತ್ತು ಕೃಷಿ ಸಂಸ್ಕರಣೆ ಉದ್ದಿಮೆಗಳು ಸೇರಿದಂತೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ಕೈಗಾರಿಕಾ ನೀತಿ 2025-30ನ್ನು ಜಾರಿಗೆ ತಂದಿದ್ದು, ಹೆಚ್ಚಿನ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಹಾಗೂ ವಿವಿಧ ಕಾರ್ಯಕ್ರಮಗಳನ್ನು ಕಲ್ಪಿಸಲಾಗಿರುತ್ತದೆ. ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.<br><br>ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮವು ಮೈಸೂರಿನಲ್ಲಿ ಗಂಧದ ಕೆತ್ತನೆ, ಮೈಸೂರು ಕುಂದಣ ಕಲೆ ಕುಶಲಕರ್ಮಿಗಳ ಸಬಲೀಕರಣ ಮತ್ತು ಕರಕುಶಲ ಕಲೆಗಳ ಉತ್ತೇಜನಕ್ಕಾಗಿ ಮೈಸೂರಿನಲ್ಲಿ ಬಹು ಕಲಾ ಸಂಕೀರ್ಣವನ್ನು ಸ್ಥಾಪಿಸಿ ಈ ಕೆಳಗಿನ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>1. ಸಾಮಾನ್ಯ ಸೌಲಭ್ಯ ಕೇಂದ್ರ, ವುಡ್ ಸೀಸನಿಂಗ್ ಪ್ಲಾಂಟ್‌ನ್ನು ಕುಶಲಕರ್ಮಿಗಳ ಉಪಯೋಗಕ್ಕಾಗಿ ಸ್ಥಾಪಿಸಲಾಗಿರುತ್ತದೆ.<br>2. ರಾಜ್ಯ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳಡಿ ವಸತಿ ಮತ್ತು ಕಾರ್ಯಾಗಾರಗಳನ್ನು ಕುಶಲಕರ್ಮಿಗಳಿಗೆ ನಿರ್ಮಿಸಿ ಕೊಡಲಾಗಿರುತ್ತದೆ.<br>3. ಕುಶಲಕರ್ಮಿಗಳಿಗೆ ವಿನ್ಯಾಸ ಮತ್ತು ತಾಂತ್ರಿಕ ಅಭಿವೃದ್ಧಿ ಕಾರ್ಯಾಗಾರ, ಸಮಗ್ರ ಕೌಶಲ್ಯ ಉನ್ನತೀಕರಣ ಕಾರ್ಯಕ್ರಮ ಮತ್ತು ಗುರು ಶಿಷ್ಯ ಹಸ್ತಶಿಲ್ಪ ಪರಿಕ್ಷಣಾ ಕಾರ್ಯಕ್ರಮ ತರಬೇತಿ ಕಾರ್ಯಕ್ರಮಗಳನ್ನು ಅಭಿವೃದ್ಧಿ ಆಯುಕ್ತರು (ಕರಕುಶಲ) ಕೇಂದ್ರ ಸರ್ಕಾರ ಕಚೇರಿಯ ಆರ್ಥಿಕ ಸಹಾಯದಿಂದ ತರಬೇತಿಯನ್ನು ನಡೆಸಲಾಗುತ್ತಿದೆ.<br>4. ಮೈಸೂರು ಸಾಂಪ್ರದಾಯಿಕ ವರ್ಣಚಿತ್ರಗಳು ಹಾಗೂ ಮೈಸೂರಿನ ಗಂಜಿಫಾ ಕಾರ್ಡ್‌ಗಳಿಗೆ ಭೌಗೋಳಿಕ ಸೂಚನೆಯ ಪ್ರಮಾಣ ಪತ್ರವನ್ನು ನಿಗಮದಿಂದ ಪಡೆಯಲಾಗಿರುತ್ತದೆ.<br>5. ನಿಗಮಕ್ಕೆ ರಾಜ್ಯ ಸರ್ಕಾರದ ಕರಕುಶಲ ಕಲೆಗೆ ಬೆಂಬಲ ಯೋಜನೆಯಡಿಯಲ್ಲಿ ಬಿಡುಗಡೆಯಾಗುವ ಅನುದಾನದಲ್ಲಿ ಶೇ.50 ರ ರಿಯಾಯಿತಿ ದರದಲ್ಲಿ ನಿಗಮದ ನೋಂದಾಯಿತ ಶ್ರೀ ಗಂಧ ಕರಕುಶಲಕರ್ಮಿಗಳಿಗೆ ಶ್ರೀಗಂಧದ ಕಚ್ಚಾಮಾಲನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಮೈಸೂರು ಜಿಲ್ಲೆಯಲ್ಲಿರುವ 'ಕೈಮಗ್ಗ ಕ್ಲಸ್ಟರ್‌ಗಳಿಗೆ' (Handloom Clusters) ಮಂಜೂರಾದ ಅನುದಾನವೆಷ್ಟು ಮತ್ತು ಈ ಪೈಕಿ ಎಷ್ಟು ಹಣವನ್ನು ಬಿಡುಗಡೆ ಮಾಡಿ ಸದುಪಯೋಗಪಡಿಸಿಕೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು); | ಕಳೆದ ಮೂರು ವರ್ಷಗಳಲ್ಲಿ ಮೈಸೂರು ಜಿಲ್ಲೆಯಲ್ಲಿ ಯಾವುದೇ ಕೈಮಗ್ಗ ಕ್ಲಸ್ಟರ್‌ಗಳು ಅನುಷ್ಠಾನಗೊಂಡಿರುವುದಿಲ್ಲ.<br><br>ಮೈಸೂರು ಜಿಲ್ಲೆಯಲ್ಲಿರುವ ಕೈಮಗ್ಗ ನೇಕಾರರ ಸಹಕಾರ ಸಂಘಗಳಿಗೆ ಜಿಲ್ಲಾ ವಲಯ ಯೋಜನೆಯಡಿ ಬಿಡುಗಡೆಯಾದ ಅನುದಾನದ ವಿವರಗಳನ್ನು **ಅನುಬಂಧ-2** ರಲ್ಲಿ ಲಗತ್ತಿಸಿದೆ. |

| | | |
|---|---|---|
| ಇ) | ಮೈಸೂರಿನ ರೇಷ್ಮೆ ಮತ್ತು ಕರಕುಶಲ ಉತ್ಪನ್ನಗಳಿಗೆ ಜಾಗತಿಕ ಮಟ್ಟದಲ್ಲಿ ಬ್ರ್ಯಾಂಡಿಂಗ್ ಮಾಡಲು ಹಾಗೂ ಮಾರುಕಟ್ಟೆ ಒದಗಿಸಲು ಸರ್ಕಾರವು ಜಿಲ್ಲೆಯಲ್ಲಿ ಹೊಸದಾಗಿ ವಿನ್ಯಾಸ ಕೇಂದ್ರಗಳನ್ನು (Design Centers) ಸ್ಥಾಪಿಸುವ ಪ್ರಸ್ತಾವನೆ ಹೊಂದಿದೆಯೇ; | ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮದ ಕಲಾ ಸಂಕೀರ್ಣಗಳಿಂದ ಕುಶಲಕರ್ಮಿಗಳ ಉತ್ಪನ್ನಗಳನ್ನು, ಶ್ರೀಗಂಧದ ನೋಂದಾಯಿತ ಕರಕುಶಲಕರ್ಮಿಗಳು ತಯಾರಿಸುವ ಶ್ರೀಗಂಧದ ಕಲಾಕೃತಿಗಳನ್ನು ಹಾಗು ಬೀಟೆ ಮರದ ಕಲಾಕೃತಿಗಳನ್ನು ಖರೀದಿಸಿ ನಿಗಮದ 11 ಕಾವೇರಿ ಮಾರಾಟ ಮಳಿಗೆಗಳಲ್ಲಿ ಹಾಗೂ ಆನ್‌ಲೈನ್ ಫ್ಲಾಟ್‌ಫಾರ್ಮ್ ಗಳಲ್ಲಿ ಮಾರಾಟ ಮಾಡಲು ಮಾರುಕಟ್ಟೆ ಸೌಲಭ್ಯವನ್ನು ಒದಗಿಸಲಾಗುತ್ತಿದೆ. |
| ಈ) | ಕೇಂದ್ರ ಸರ್ಕಾರದ 'ಕ್ಲಸ್ಟರ್ ಅಭಿವೃದ್ಧಿ ಯೋಜನೆ' ಯಡಿ (MSE-CDP) ಮೈಸೂರು ಜಿಲ್ಲೆಯ ಎಷ್ಟು MSME ಘಟಕಗಳಿಗೆ ಆರ್ಥಿಕ ನೆರವು ನೀಡಲಾಗಿದೆ ಮತ್ತು ಅದರಲ್ಲಿ ರಾಜ್ಯ ಸರ್ಕಾರದ ಪಾಲಿನ ಮೊತ್ತವೆಷ್ಟು? | ಮೈಸೂರು ಜಿಲ್ಲೆಯಿಂದ ಕೇಂದ್ರ ಸರ್ಕಾರದ ಕ್ಲಸ್ಟರ್ ಅಭಿವೃದ್ಧಿ ಯೋಜನೆ (MSE-CDP) ಯಡಿ ಯಾವುದೇ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲವಾದ್ದರಿಂದ ಯಾವುದೇ ಆರ್ಥಿಕ ನೆರವು ನೀಡಿರುವುದಿಲ್ಲ. |

ಸಿಐ 87 ಸಿಎಸ್‌ಸಿ 2026

**(ಶರಣಬಸಪ್ಪ ದರ್ಶನಾಪುರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ
ಸಚಿವರು.